# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 373 |
| ಸದಸ್ಯರ ಹೆಸರು | : | ಶ್ರೀ ಎಂ.ಎಲ್. ಅನಿಲ್‌ಕುಮಾರ್<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 10.03.2025 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟದ ಯೋಜನೆಯ ಉದ್ದೇಶವೇನು; ಇದನ್ನು ಯಾವ ವರ್ಷದಲ್ಲಿ ಪ್ರಾರಂಭಿಸಲಾಯಿತು; (ಸಂಪೂರ್ಣ ಮಾಹಿತಿ ನೀಡುವುದು) | ಮಧ್ಯಾಹ್ನ ಬಿಸಿಯೂಟ ಯೋಜನೆಯ ಉದ್ದೇಶಗಳು ಕೆಳಕಂಡಂತಿದೆ.<br>1. ಶಾಲಾ ಮಕ್ಕಳ ದಾಖಲಾತಿ ಮತ್ತು ಹಾಜರಾತಿ ಹೆಚ್ಚಿಸುವುದು.<br>2. ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಮಕ್ಕಳು ಶಾಲೆಯನ್ನು ತೊರೆಯದಂತೆ ತಡೆಯುವುದು.<br>3. ಶಾಲಾ ಮಕ್ಕಳ ಪೌಷ್ಟಿಕಾಂಶ ಹೆಚ್ಚಿಸುವುದರ ಮೂಲಕ ಅವರ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ವೃದ್ಧಿಗೊಳಿಸುವುದು.<br>4. ರಾಜ್ಯದಲ್ಲಿ ಶಾಲಾ ಮಕ್ಕಳ ಅಪೌಷ್ಟಿಕತೆ, ಅನಿಮಿಯಾ ಮತ್ತು ಬಹುಪೋಷಕಾಂಶಗಳ ಕೊರತೆಯಿಂದಾಗುವ ಅನಾರೋಗ್ಯ ಪರಿಸ್ಥಿತಿಯನ್ನು ತಡೆಗಟ್ಟುವುದು.<br>5. ಶಾಲಾ ಮಕ್ಕಳ ಕಲಿಕಾ ಸಾಮರ್ಥ್ಯವನ್ನು ವೃದ್ಧಿಸುವುದು.<br>6. ಸಾಮಾಜಿಕ ಸಮಾನತೆಯನ್ನು ಕಾಯ್ದುಕೊಂಡು ರಾಷ್ಟ್ರೀಯ ಭಾವೈಕ್ಯತೆಯನ್ನು ಮಕ್ಕಳ ಮನೋಧೋರಣೆಯಲ್ಲಿ ಬಲಪಡಿಸುವುದು.<br>ರಾಜ್ಯದಲ್ಲಿ ಮಧ್ಯಾಹ್ನ ಬಿಸಿಯೂಟ ಯೋಜನೆಯನ್ನು ದಿನಾಂಕ: 02.10.2001 ರಿಂದ ಪ್ರಾರಂಭಿಸಲಾಗಿದೆ. |
| ಆ) | ಈ ಯೋಜನೆಯಡಿಯಲ್ಲಿ ಪೌಷ್ಠಿಕ ಆಹಾರ ಮೊಟ್ಟೆ ಮತ್ತು ಇನ್ನಿತರ ಉತ್ಪನ್ನಗಳನ್ನು ಯಾವ ರೀತಿ ಖರೀದಿಸಲಾಗುವುದು; ಪ್ರತಿ ಉತ್ಪನ್ನಗಳಿಗೆ ಸರ್ಕಾರದಿಂದ ನಿಗಧಿಪಡಿಸಿರುವ ಮೊತ್ತವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು) | ಸದರಿ ಯೋಜನೆಯಡಿ ನೀಡಲಾಗುತ್ತಿರುವ ಪೂರಕ ಪೌಷ್ಠಿಕ ಆಹಾರವಾಗಿ ಬೇಯಿಸಿದ ಮೊಟ್ಟೆ ಅಥವಾ ಮೊಟ್ಟೆಯನ್ನು ಸೇವಿಸದ ವಿದ್ಯಾರ್ಥಿಗಳಿಗೆ ಬಾಳೆಹಣ್ಣನ್ನು ಪ್ರತಿ ಶಾಲಾ ಹಂತದಲ್ಲಿ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಅಧ್ಯಕ್ಷರು, ಶಾಲಾ ಮುಖ್ಯ ಶಿಕ್ಷಕರು ಹಾಗೂ ಇತರರನ್ನೊಳಗೊಂಡ ಖರೀದಿ ಸಮಿತಿಯನ್ನು ರಚಿಸಿಕೊಂಡು ಖರೀದಿಸಲಾಗುತ್ತದೆ. ಪೂರಕ ಪೌಷ್ಠಿಕ ಆಹಾರಗಳಾದ ಮೊಟ್ಟೆ/ಬಾಳೆಹಣ್ಣಿಗೆ ಪ್ರತಿ ವಿದ್ಯಾರ್ಥಿಗೆ ಒಂದು ದಿನಕ್ಕೆ ರೂ 6/-ಗಳ ಘಟಕ ವೆಚ್ಚವನ್ನು ನಿಗದಿಪಡಿಸಲಾಗಿದೆ.<br>ಶ್ರೀ ಸತ್ಯ ಸಾಯಿ ಅನ್ನಪೂರ್ಣ ಟ್ರಸ್ಟ್ (ರಿ) ಮುದ್ದೇನಹಳ್ಳಿ, ಚಿಕ್ಕಬಳ್ಳಾಪುರ ಜಿಲ್ಲೆ, ಈ ಸಂಸ್ಥೆಯ ವತಿಯಿಂದ ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 1 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಸಾಯಿ ಶ್ಯೂರ್ ರಾಗಿ ಹೆಲ್ತ್ ಮಿಕ್ಸ್ ಪುಡಿಯನ್ನು ಉಚಿತವಾಗಿ ನೀಡಲಾಗುತ್ತಿದೆ. |

<table>
<tr><td></td><td></td><td>ಸದರಿ ಹೆಲ್ತ್ ಮಿಕ್ಸ್ ಪುಡಿಯನ್ನು ಕ್ಷೀರಭಾಗ್ಯ ಯೋಜನೆಯಡಿ ನೀಡಲಾಗುತ್ತಿರುವ ಬಿಸಿಹಾಲಿನೊಂದಿಗೆ ಮಿಶ್ರಣ ಮಾಡಿ ವಿದ್ಯಾರ್ಥಿಗಳಿಗೆ ವಾರದಲ್ಲಿ ಮೂರು ದಿನ ನೀಡಲಾಗುತ್ತಿದೆ.<br><br>ಸಾಯಿ ಶ್ಯೂರ್ ರಾಗಿ ಹೆಲ್ತ್ ಮಿಕ್ಸ್ ಪುಡಿಯನ್ನು ಸಾಗಾಣಿಕೆ ವೆಚ್ಚದ ದರವನ್ನು ಪ್ರತಿ ಕೆ.ಜಿಗೆ ರೂ 12.42 ರಂತೆ ನಿಗದಿಪಡಿಸಲಾಗಿದೆ.</td></tr>
<tr><td>ಇ)</td><td>ಈ ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಡುಗೆ ತಯಾರಕರು, ನಿರ್ವಾಹಕರು ಎಷ್ಟು; ಸದರಿಯವರಿಗೆ ಯೋಜನೆ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೂ ನೀಡುವ ವೇತನ ಹಾಗೂ ಇನ್ನಿತರ ಸೌಲಭ್ಯಗಳ ಸಂಪೂರ್ಣ ಮಾಹಿತಿ ನೀಡುವುದು;</td><td>2024-25ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಮಧ್ಯಾಹ್ನ ಉಪಹಾರ ಯೋಜನೆಯಡಿ 44,812 ಮುಖ್ಯ ಅಡುಗೆ ಸಿಬ್ಬಂದಿಗಳು 68,387 ಸಹಾಯಕ ಅಡುಗೆ ಸಿಬ್ಬಂದಿಗಳನ್ನು ಒಳಗೊಂಡಂತೆ ಒಟ್ಟಾರೆ 1,13,199 ಅಡುಗೆ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ.<br><br>ಮಧ್ಯಾಹ್ನದ ಬಿಸಿಯೂಟ ಪ್ರಾರಂಭವಾದಾಗಿನಿಂದ ಇಲ್ಲಿಯವರೆವಿಗೂ ನೀಡಿರುವ ಅಡುಗೆ ಸಿಬ್ಬಂದಿಗಳಿಗೆ ನೀಡಲಾಗಿರುವ ತಲಾ ಮಾಸಿಕ ಗೌರವ ಸಂಭಾವನೆ ವಿವರಗಳನ್ನು ಅನುಬಂಧದಲ್ಲಿ ಒದಗಿಸಿದೆ.<br><br>ಅಡುಗೆ ಸಿಬ್ಬಂದಿಗಳಿಗೆ ನೀಡಲಾಗಿರುವ ಇತರೆ ಸೌಲಭ್ಯಗಳ ವಿವರ ಕೆಳಕಂಡಂತಿದೆ.<br><br>1)ಅಡುಗೆ ಸಿಬ್ಬಂದಿಯವರು ಅಡುಗೆ ಕೆಲಸ ನಿರ್ವಹಿಸುವ ಸಂದರ್ಭದಲ್ಲಿ ಸುಟ್ಟಗಾಯಗಳಾದಲ್ಲಿ ರೂ.30,000/-, ಶಾಶ್ವತ ಅಂಗವಿಕಲತೆ ಉಂಟಾದಲ್ಲಿ ಗರಿಷ್ಠ ರೂ.75,000/- ಮತ್ತು ಸುಟ್ಟಗಾಯಗಳಾಗಿ ಮರಣ ಹೊಂದಿದ ಸಂದರ್ಭದಲ್ಲಿ ರೂ.1,00,000/-ಗಳ ಪರಿಹಾರವನ್ನು ನೀಡಲಾಗುತ್ತದೆ.<br><br>2) ಮಧ್ಯಾಹ್ನ ಉಪಹಾರ ಯೋಜನೆಯಡಿ ಆಯ್ಕೆಗೊಂಡು 60 ವರ್ಷಗಳ ವಯೋಮಾನವನ್ನು ಪೂರ್ಣಗೊಳಿಸಿ ದಿನಾಂಕ: 31.03.2022ಕ್ಕೆ ಅಥವಾ ನಂತರ ಕರ್ತವ್ಯದಿಂದ ಬಿಡುಗಡೆ ಹೊಂದಿದ ಅಡುಗೆ ಸಿಬ್ಬಂದಿಗೆ ಅಂತಿಮವಾಗಿ ಒಂದು ಬಾರಿಯ ಇಡಿಗಂಟು ಸೌಲಭ್ಯವನ್ನು ಕೆಳಕಂಡಂತೆ ನೀಡಲು ಅನುಮತಿ ನೀಡಲಾಗಿದೆ.<br><br><table><tr><td>ಅಡುಗೆ ಸಿಬ್ಬಂದಿಯವರು ಸಲ್ಲಿಸಿದ ಸೇವೆಯ ಅವಧಿ</td><td>ಅಡುಗೆ ಸಿಬ್ಬಂದಿಗಳು ಸಲ್ಲಿಸಿದ ಸೇವೆಯನ್ನು ಆಧರಿಸಿ ಒಂದು ಬಾರಿಗೆ ನೀಡಲು ಆದೇಶಿಸಲಾಗಿರುವ ಅಂತಿಮ ಇಡಿಗಂಟಿನ ಮೊತ್ತ</td></tr><tr><td>5 ವರ್ಷಕ್ಕೂ ಮೇಲ್ಪಟ್ಟು ಹಾಗೂ 15 ವರ್ಷಕ್ಕಿಂತ ಕಡಿಮೆ</td><td>ರೂ 30,000/-<br>(ಮೂವತ್ತು ಸಾವಿರ ಮಾತ್ರ)</td></tr><tr><td>15 ವರ್ಷ ಹಾಗೂ ಅದಕ್ಕೂ ಹೆಚ್ಚು</td><td>ರೂ 40,000/-<br>(ನಲವತ್ತು ಸಾವಿರ ಮಾತ್ರ)</td></tr></table></td></tr>
</table>

| | | |
|---|---|---|
| ಈ) | ಸದರಿ ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಬೇಸಿಗೆ ರಜಾ, ದಸರಾ ರಜಾ ಹಾಗೂ ಬರಗಾಲದ ರಜೆಗಳಲ್ಲಿ ವೇತನ ಹಾಗೂ ಇನ್ನಿತರ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆಯೇ; ಇಲ್ಲದಿದ್ದಲ್ಲಿ ಯಾವ ಕಾಲಮಿತಿಯೊಳಗೆ ಈ ಸೌಲಭ್ಯವನ್ನು ಕಲ್ಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದು? (ಸಂಪೂರ್ಣ ಮಾಹಿತಿ ನೀಡುವುದು) | ಮಧ್ಯಾಹ್ನ ಉಪಹಾರ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿರುವುದರಿಂದ, ಸದರಿ ಯೋಜನೆಯನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಅನುಷ್ಠಾನ ಮಾಡಲಾಗುತ್ತದೆ.<br><br>ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಮಧ್ಯಾಹ್ನ ಉಪಹಾರ ಯೋಜನೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ಅಡುಗೆ ಸಿಬ್ಬಂದಿಗಳಿಗೆ ವರ್ಷದಲ್ಲಿ 10 ತಿಂಗಳ ಅವಧಿಗೆ ಮಾತ್ರ ಗೌರವ ಸಂಭಾವನೆಯನ್ನು ಪಾವತಿಸಲು ಅವಕಾಶ ಕಲ್ಪಿಸಲಾಗಿದೆ.<br><br>ಪ್ರತಿ ಆರ್ಥಿಕ ವರ್ಷದಲ್ಲಿ 10 ತಿಂಗಳ ಅವಧಿಗೆ ಮಾತ್ರ ಶಾಲೆಗಳು ನಡೆಯುತ್ತದೆ. ಬೇಸಿಗೆ ರಜೆ ಅವಧಿಯಲ್ಲಿ ಶಾಲೆಗಳು ನಡೆಯುವುದಿಲ್ಲ.<br><br>ಆದಕಾರಣ ಪ್ರತಿ ಆರ್ಥಿಕ ವರ್ಷದಲ್ಲಿ ಜೂನ್ ಮಾಹೆಯಿಂದ ಆರ್ಥಿಕ ವರ್ಷದ ಅಂತ್ಯದ ಮಾರ್ಚ್ ಮಾಹೆಯವರೆಗೆ 10 ತಿಂಗಳ ಅವಧಿಗೆ ಮಾತ್ರ ಮಧ್ಯಾಹ್ನ ಬಿಸಿಯೂಟ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಅಡುಗೆ ಸಿಬ್ಬಂದಿಗಳಿಗೆ ಗೌರವ ಸಂಭಾವನೆಯನ್ನು ಪಾವತಿಸಲಾಗುತ್ತದೆ. ಬೇಸಿಗೆ ರಜೆ ಅವಧಿಯಲ್ಲಿ ಶಾಲೆಗಳು ನಡೆಯದ ಕಾರಣ ಅಡುಗೆ ಸಿಬ್ಬಂದಿಗಳಿಗೆ ಗೌರವ ಸಂಭಾವನೆಯನ್ನು ನೀಡಲು ಅವಕಾಶವಿರುವುದಿಲ್ಲ.<br><br>ಆದರೆ ಬೇಸಿಗೆ ರಜೆ ಅವಧಿಯಲ್ಲಿ ಬರಪೀಡಿತ ಪ್ರದೇಶಗಳಲ್ಲಿ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಬಿಸಿಯೂಟವನ್ನು ನೀಡುವುದರಿಂದ, ಈ ಅವಧಿಯಲ್ಲಿ ಮಧ್ಯಾಹ್ನದ ಬಿಸಿಯೂಟವನ್ನು ಸಿದ್ಧಪಡಿಸಲು ಕಾರ್ಯನಿರ್ವಹಿಸುವ ಅಡುಗೆ ಸಿಬ್ಬಂದಿಗಳಿಗೆ ಗೌರವ ಸಂಭಾವನೆಯನ್ನು ನೀಡಲಾಗುತ್ತದೆ. |

ಇಪಿ 23 ಎಂಎಂಎಸ್ 2025

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.

## ಅನುಬಂಧ-1

ಅಡುಗೆ ಸಿಬ್ಬಂದಿಗಳಿಗೆ 2001 ರಿಂದ ಇಲ್ಲಿಯವರೆಗೆ ನೀಡಿರುವ ಮತ್ತು ಪ್ರಸ್ತುತ ನೀಡಲಾಗುತ್ತಿರುವ ಮಾಸಿಕ ಗೌರವ ಸಂಭಾವನೆಯ ವಿವರ

| ಕ್ರ.ಸಂ | ಗೌರವ ಸಂಭಾವನೆ ಜಾರಿ ಮಾಡಿದ ವರ್ಷ ಮತ್ತು ದಿನಾಂಕ | ಹೆಚ್ಚಿಸಲಾದ ಗೌರವ ಸಂಭಾವನೆ ಮೊತ್ತ | ಮುಖ್ಯ ಅಡುಗೆ ಸಿಬ್ಬಂದಿಗಳಿಗೆ | | | | ಸಹಾಯಕ ಅಡುಗೆ ಸಿಬ್ಬಂದಿಗಳಿಗೆ | | | |
|---|---|---|---|---|---|---|---|---|---|---|
| | | | ಕೇಂದ್ರದ ಪಾಲು | ರಾಜ್ಯದ ಪಾಲು | ಹೆಚ್ಚುವರಿ ರಾಜ್ಯದ ಪಾಲು | ಒಟ್ಟು ಸಂಭಾವನೆ ಮೊತ್ತ | ಕೇಂದ್ರದ ಪಾಲು | ರಾಜ್ಯದ ಪಾಲು | ಹೆಚ್ಚುವರಿ ರಾಜ್ಯದ ಪಾಲು | ಒಟ್ಟು ಸಂಭಾವನೆ ಮೊತ್ತ |
| 1 | 2001 ದಿನಾಂಕ: 02.10.2001 ರಿಂದ | | 0.00 | 650.00 | 0.00 | **650.00** | 0.00 | 450.00 | 0.00 | **450.00** |
| 2 | 2008 ದಿನಾಂಕ: 30.08.2008 ರಿಂದ | | 0.00 | 800.00 | 0.00 | **800.00** | 0.00 | 550.00 | 0.00 | **550.00** |
| 3 | 2009 ದಿನಾಂಕ: 01.12.2009 ರಿಂದ | ಮುಖ್ಯ ಅಡುಗೆಯವರಿಗೆ ಮಾಸಿಕ ರೂ 100/- | 750.00 | 250.00 | 100.00 | **1100.00** | 750.00 | 250.00 | 0.00 | **1000.00** |
| 4 | 2013 ದಿನಾಂಕ: 01.08.2013 ರಿಂದ | 100/- | 750.00 | 250.00 | 200.00 | **1200.00** | 750.00 | 250.00 | 100.00 | **1100.00** |
| 5 | 2014 ದಿನಾಂಕ: 01.04.2014 ರಿಂದ | 500/- | 750.00 | 250.00 | 700.00 | **1700.00** | 750.00 | 250.00 | 600.00 | **1600.00** |
| 6 | 2015 ದಿನಾಂಕ: 01.04.2015 ರಿಂದ | ಕೇಂದ್ರ ಹಾಗೂ ರಾಜ್ಯದ ಪಾಲಿನ ಅನುದಾನದ ಹಂಚಿಕೆ ಅನುಪಾತವನ್ನು ದಿನಾಂಕ: 01.04.2015 ರಿಂದ 60:40ಗೆ ನಿಗದಿಪಡಿಸಲಾಗಿರುತ್ತದೆ. | 600.00 | 400.00 | 700.00 | **1700.00** | 600.00 | 400.00 | 600.00 | **1600.00** |
| 7 | 2016 ದಿನಾಂಕ: 01.04.2016 ರಿಂದ | 300/- | 600.00 | 400.00 | 1000.00 | **2000.00** | 600.00 | 400.00 | 900.00 | **1900.00** |
| 8 | 2017 ದಿನಾಂಕ: 01.07.2017 ರಿಂದ | 200/- | 600.00 | 400.00 | 1200.00 | **2200.00** | 600.00 | 400.00 | 1100.00 | **2100.00** |
| 9 | 2018 ದಿನಾಂಕ: 01.01.2018 ರಿಂದ | 500/- | 600.00 | 400.00 | 1700.00 | **2700.00** | 600.00 | 400.00 | 1600.00 | **2600.00** |
| 10 | 2022 ದಿನಾಂಕ: 01.06.2022 ರಿಂದ ಇಲ್ಲಿಯ ವರೆಗೆ | 1000/- | 600.00 | 400.00 | 2700.00 | **3700.00** | 600.00 | 400.00 | 2600.00 | **3600.00** |